# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 598 |
| ಸದಸ್ಯರ ಹೆಸರು | : | ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 23-12-2022 |
| ಉತ್ತರಿಸುವ ಸಚಿವರು | : | ಕೃಷಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೃಷಿ ಇಲಾಖೆಯಿಂದ ರೈತಾಪಿ ವರ್ಗದವರಿಗೆ ಸಬ್ಸಿಡಿಯಾಗಿ ನೀಡುತ್ತಿರುವ ಯೋಜನೆಗಳಾವುವು; (ಎಸ್.ಸಿ., ಎಸ್.ಟಿ., ಓ.ಬಿ.ಸಿ., ಪ್ರವರ್ಗ, ಇತರೆ ವರ್ಗದ ರೈತರ ಪ್ರತ್ಯೇಕ ಸಬ್ಸಿಡಿ ಯೋಜನೆಗಳ ಸಂಖ್ಯೆಗಳ ಮಾಹಿತಿಯನ್ನು ದಾಖಲಾತಿಗಳೊಂದಿಗೆ ನೀಡುವುದು) | ಕೃಷಿ ಇಲಾಖೆಯಿಂದ ರೈತಾಪಿ ವರ್ಗದವರಿಗೆ ಸಬ್ಸಿಡಿಯಾಗಿ ನೀಡುತ್ತಿರುವ ಯೋಜನೆಗಳು ಹಾಗೂ ಎಸ್.ಸಿ., ಎಸ್.ಟಿ., ಓ.ಬಿ.ಸಿ., ಪ್ರವರ್ಗ, ಇತರೆ ವರ್ಗದ ರೈತರ ಪ್ರತ್ಯೇಕ ಸಬ್ಸಿಡಿ ಯೋಜನೆಗಳ ವಿವರಗಳನ್ನು ಅನುಬಂಧ-1 ರಲ್ಲಿ ಒದಗಿಸಲಾಗಿದೆ.<br><br>ಜಲಾನಯನ ಅಭಿವೃದ್ಧಿ ಇಲಾಖೆಯಿಂದ ರೈತಾಪಿ ವರ್ಗದವರಿಗೆ ಸಬ್ಸಿಡಿಯಾಗಿ ನೀಡಲಾಗುತ್ತಿರುವ ಯೋಜನೆಯಾದ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಸುಸ್ಥಿರ ಕೃಷಿ ಅಭಿಯಾನ-ಮಳೆ ಆಧಾರಿತ ಪ್ರದೇಶ ಅಭಿವೃದ್ಧಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br><br>ಈ ಯೋಜನೆಯಡಿ ರೈತರಿಗೆ ಸಮಗ್ರ ಕೃಷಿ ಪದ್ಧತಿಗಳಾದ ಬಹುಬೆಳೆ ಪದ್ಧತಿ, ಮಿಶ್ರಬೆಳೆ, ಅಂತರಬೆಳೆ, ಬೆಳೆ ಪರಿವರ್ತನೆ, ಅದರಲ್ಲೂ ತೋಟಗಾರಿಕೆ, ಕೃಷಿ ಅರಣ್ಯ, ಪಶುಸಂಗೋಪನೆ ಮತ್ತು ಹುಲ್ಲುಗಾವಲು ಘಟಕಗಳನ್ನೊಳಗೊಂಡಂತೆ ಮೌಲ್ಯವರ್ಧನೆ ಚಟುವಟಿಕೆಗಳಾದ ಜೇನುಸಾಕಣೆ, ರಸಮೇವು ಘಟಕ, ಎರೆಹುಳು ಉತ್ಪಾದನಾ ಘಟಕಗಳನ್ನು ಅನುಷ್ಠಾನಗೊಳಿಸಲು ಉತ್ತೇಜಿಸುವ ಸಲುವಾಗಿ ಸಹಾಯಧನವನ್ನು ನೀಡಲಾಗುತ್ತಿದೆ.<br><br>ಎಸ್.ಸಿ, ಎಸ್.ಟಿ, ಓಬಿಸಿ, ಪ್ರವರ್ಗ, ಇತರೆ ವರ್ಗದ ರೈತರುಗಳಿಗೆ ಜಲಾನಯನ ಅಭಿವೃದ್ಧಿ ವಿಭಾಗದಲ್ಲಿ ಪ್ರತ್ಯೇಕ ಸಬ್ಸಿಡಿ ಯೋಜನೆಗಳಿರುವುದಿಲ್ಲ. ಆದಾಗ್ಯೂ ಸದರಿ ಯೋಜನೆಯಡಿ ಪರಿಶಿಷ್ಟ ಜಾತಿ ಉಪಯೋಜನೆಯಡಿ ಶೇ. 16 ರಷ್ಟು ಹಾಗೂ ಗಿರಿಜನ ಉಪಯೋಜನೆಯಡಿ ಶೇ. 8 ರಷ್ಟು ಅನುದಾನವನ್ನು ಒದಗಿಸಲಾಗಿದೆ. |
| ಆ) | ಸದರಿ ಸಬ್ಸಿಡಿ ಯೋಜನೆಯಲ್ಲಿ ಕಳೆದ 5 ವರ್ಷಗಳಿಂದ ಹರಿಹರ ತಾಲ್ಲೂಕಿನ ರೈತರಿಗೆ ನೀಡಿರುವ ಯೋಜನೆಗಳಾವುವು; ಯಾವ ಯಾವ ಯೋಜನೆಗಳು, ಎಸ್.ಸಿ, ಎಸ್.ಟಿ, ಓ.ಬಿ.ಸಿ, ಪ್ರವರ್ಗ | ಕಳೆದ 5 ವರ್ಷಗಳಿಂದ ಈ ಸಬ್ಸಿಡಿ ಯೋಜನೆಯಲ್ಲಿ ಹರಿಹರ ತಾಲ್ಲೂಕಿನ ಎಸ್.ಸಿ, ಎಸ್.ಟಿ, ಓಬಿಸಿ, ಪ್ರವರ್ಗ ಹಾಗೂ ಇತರೆ ವರ್ಗದ ರೈತರಿಗೆ ಇಲಾಖೆಯಿಂದ ನೀಡಿರುವ ಯೋಜನೆಗಳಡಿ ರೈತರ ಹೆಸರು, ಗ್ರಾಮವಾರು ಸಂಪೂರ್ಣ ಮಾಹಿತಿಯನ್ನು ಪೆನ್ ಡ್ರೈವ್ ರೂಪದಲ್ಲಿ ಒದಗಿಸಲಾಗಿದೆ. |

| | | |
|---|---|---|
| | ಇತರೆ ವರ್ಗದ ರೈತರ ಪ್ರತ್ಯೇಕ ಸಬ್ಸಿಡಿ ಯೋಜನೆಗಳ ಹಾಗೂ ರೈತರ ಹೆಸರು, ಗ್ರಾಮವಾರು ಸಂಪೂರ್ಣ ಮಾಹಿತಿಯನ್ನು ದಾಖಲಾತಿಗಳೊಂದಿಗೆ ನೀಡುವುದು; | ಹರಿಹರ ತಾಲ್ಲೂಕಿನಲ್ಲಿ ಕಳೆದ 5 ವರ್ಷಗಳಿಂದ ರಾಷ್ಟ್ರೀಯ ಸುಸ್ಥಿರ ಕೃಷಿ ಅಭಿಯಾನ-ಮಳೆ ಆಧಾರಿತ ಪ್ರದೇಶ ಅಭಿವೃದ್ಧಿ ಕಾರ್ಯಕ್ರಮ ಇರುವುದಿಲ್ಲ. |
| ಇ) | ಇತ್ತೀಚಿಗೆ ಅಡಿಕೆ ಬೆಳೆಗಳಿಗೆ ನುಸಿ ರೋಗ/ಕೊಳೆ ರೋಗ ಇನ್ನಿತರೆ ರೋಗಗಳು ಬಂದಿದ್ದು, ರೈತರಿಗೆ ತೀವ್ರವಾಗಿ ಸಂಕಷ್ಟವಾಗುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ; ಬಂದಿದ್ದಲ್ಲಿ, ಸದರಿ ರೋಗಗಳ ನಿವಾರಣೆಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆಯ; (ಸಂಪೂರ್ಣ ಮಾಹಿತಿಯನ್ನು ಒದಗಿಸುವುದು) | ಸರ್ಕಾರದ ಗಮನಕ್ಕೆ ಬಂದಿದೆ.<br><br>ರೋಗಗಳ ನಿಯಂತ್ರಣಕ್ಕೆ ತೆಗೆದುಕೊಂಡ ಕ್ರಮಗಳು ಈ ಕೆಳಗಿನಂತಿವೆ.<br>1. ರಾಜ್ಯವಲಯ ಯೋಜನೆಯಾದ ತೋಟಗಾರಿಕೆ ಬೆಳೆಗಳ ಕೀಟ ಮತ್ತು ರೋಗಗಳ ಸಮಗ್ರ ನಿಯಂತ್ರಣ ಕಾರ್ಯಕ್ರಮದಡಿ ಸಸ್ಯ ಸಂರಕ್ಷಣಾ ಔಷಧಿ ಖರೀದಿಗೆ ಸಾಮಾನ್ಯ ವರ್ಗದವರಿಗೆ ಶೇ.75 ರಷ್ಟು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವರ್ಗದವರಿಗೆ ಶೇ.90 ರಷ್ಟು ಸಹಾಯಧನವನ್ನು ನೀಡಲಾಗುತ್ತಿದೆ.<br>2. ಅಡಿಕೆ ಹಳದಿ ಎಲೆ ರೋಗ ಬಾಧಿತ ಪ್ರದೇಶಗಳಲ್ಲಿ ಅಡಿಕೆ ಬೆಳೆಯ ಬದಲಾಗಿ ಇತರೆ ವಾಣಿಜ್ಯ ತೋಟಗಾರಿಕೆ ಬೆಳೆಗಳಾದ ಬಾಳೆ, ತೆಂಗು, ಕಾಫಿ, ಕೋಕೋ, ಕಾಳುಮೆಣಸು, ಜಾಯಿ ಕಾಯಿ, ಬೆಣ್ಣೆಹಣ್ಣು ಹಾಗೂ ಇತರೆ ಬೆಳೆಗಳನ್ನು ಬೆಳೆಯಲು ಪ್ರೋತ್ಸಾಹಿಸಲಾಗುತ್ತಿದೆ.<br>3. ಅಡಿಕೆ ಬೆಳೆಗಾರರಿಗೆ 4 ಹೆಕ್ಟೇರ್ ವರೆಗೆ ಪರ್ಯಾಯ ಬೆಳೆ ಉತ್ತೇಜಿಸಲು ಹೆಕ್ಟೇರ್ ಒಂದಕ್ಕೆ ರೂ.15000/-ಗಳ ಸಹಾಯಧನ ನೀಡಲಾಗುತ್ತಿದೆ.<br>4. ಅಡಿಕೆ ಎಲೆ ಚುಕ್ಕೆ ರೋಗದ ನಿಯಂತ್ರಣಕ್ಕೆ ರೈತರಿಗೆ ಪ್ರತಿ ಹೆಕ್ಟೇರ್‌ಗೆ ರೂ.4000/-ಗಳಂತೆ ಮೊದಲನೇ ಸಿಂಪರಣೆಗೆ ಸಸ್ಯ ಸಂರಕ್ಷಣಾ ಔಷಧಿಗಳನ್ನು ಉಚಿತವಾಗಿ ವಿತರಿಸಲಾಗುತ್ತಿದೆ.<br>5. ಕೇಂದ್ರ ವಲಯ ಯೋಜನೆಯಾದ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಅಡಿಯಲ್ಲಿ ಸಮಗ್ರ ಕೀಟ ಮತ್ತು ರೋಗಗಳ ನಿಯಂತ್ರಣ ಕೈಗೊಳ್ಳಲು ಶೇ.30ರಷ್ಟು ಸಹಾಯಧನ ಒದಗಿಸಲಾಗುತ್ತಿದೆ.<br><br>ಅಡಿಕೆ ಬೆಳೆಯ ರೋಗಗಳ ಸಂಶೋಧನೆಗೆ ಒತ್ತು ನೀಡಲು ಮತ್ತು ರೋಗ ನಿಯಂತ್ರಣ ಹಾಗೂ ನಿರ್ವಹಣೆ ಕ್ರಮಗಳಿಗೆ ಕಾರ್ಯಕ್ರಮ ರೂಪಿಸಲಾಗುತ್ತಿದೆ. |

| | | |
|---|---|---|
| ಈ) | ಕೃಷಿ ಇಲಾಖೆಯಿಂದ, ರೈತರ ಬೆಳೆಗಳನ್ನು ಉತ್ತಮಗೊಳಿಸಲು ಹಾಗೂ ಬೆಳೆಗಳಿಗೆ ಬೀಳುತ್ತಿರುವ ರೋಗಗಳನ್ನು ನಿವಾರಣೆ ಮಾಡಲು ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ಹಾಗೂ ರೈತರಿಗೆ ಅನುಕೂಲವಾಗುವ ಯಾವ ಯಾವ ಯೋಜನೆಗಳನ್ನು ಕೈಗೊಳ್ಳಲಾಗಿದೆ? (ಸಂಪೂರ್ಣ ಮಾಹಿತಿಯನ್ನು ನೀಡುವುದು) | ಬೆಳೆಗಳಲ್ಲಿ ಕಂಡುಬರುವ ಅಥವಾ ಕಂಡು ಬರಬಹುದಾದ ಕೀಟ/ರೋಗಗಳ ನಿರ್ವಹಣೆಗೆ ಕೆಳಕಂಡಂತೆ ಇಲಾಖಾ ವತಿಯಿಂದ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br>➢ ಇಲಾಖಾ ಅಧಿಕಾರಿಗಳು, ಕೃಷಿ ವಿಶ್ವವಿದ್ಯಾನಿಲಯಗಳ ವಿಜ್ಞಾನಿಗಳ ತಂಡ ನಿಯಮಿತವಾಗಿ ಪೀಡೆ ಸರ್ವೇಕ್ಷಣೆಯನ್ನು ಕೈಗೊಂಡು ಬೆಳೆಗಳಲ್ಲಿ ಕೀಟ/ರೋಗಗಳ ಬಾಧೆ ನಿರ್ವಹಣೆಗೆ ಕೈಗೊಳ್ಳಬೇಕಾದ ಕ್ರಮಗಳ ಮಾಹಿತಿಯನ್ನು ರೈತರಿಗೆ ಒದಗಿಸಲಾಗಿರುತ್ತದೆ.<br>➢ ಬೀಜ ಮತ್ತು ಮಣ್ಣಿನಿಂದ ಹರಡುವ ರೋಗಗಳಿಂದ ಬೆಳೆಗಳನ್ನು ಸಂರಕ್ಷಿಸಲು ಹೋಬಳಿ ಮಟ್ಟದಲ್ಲಿ ಬೀಜೋಪಚಾರ ಆಂದೋಲನವನ್ನು ಕೈಗೊಂಡು ರೈತರಲ್ಲಿ ಅರಿವು ಮೂಡಿಸಲಾಗುತ್ತಿದೆ.<br>➢ ಇಲಾಖೆಯ ಹೋಬಳಿ ಮಟ್ಟದಲ್ಲಿ ಈಗಾಗಲೇ ಸ್ಥಾಪಿಸಲಾಗಿರುವ 160 ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾಲಯಗಳ ಮೂಲಕ ಕ್ಷೇತ್ರ ಭೇಟಿಗಳನ್ನು ಕೈಗೊಂಡು ಕೀಟ/ರೋಗ ಬಾಧೆಗೆ ಕೈಗೊಳ್ಳಬೇಕಾದ ನಿರ್ವಹಣಾ ಕ್ರಮಗಳ ಮಾಹಿತಿಯನ್ನು ರೈತರಿಗೆ ಒದಗಿಸಲಾಗಿರುತ್ತದೆ.<br>➢ ಪ್ರಸಕ್ತ ಸಾಲಿನಲ್ಲಿ ಇನ್ನೂ 64 ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾಲಯಗಳ ಸ್ಥಾಪನೆ ಕಾರ್ಯ ಅಂತಿಮ ಹಂತದಲ್ಲಿರುತ್ತದೆ.<br>➢ ಸಂಚಾರಿ ಸಸ್ಯ ಆರೋಗ್ಯ ಚಿಕಿತ್ಸಾಲಯಗಳ ತಾಂತ್ರಿಕ ಸಿಬ್ಬಂದಿ ಇ-ಸ್ಯಾಪ್ ತಂತ್ರಜ್ಞಾನವನ್ನು ಬಳಸಿ 598 ಗ್ರಾಮಗಳ 1268 ರೈತರ ತಾಕುಗಳಿಗೆ ಭೇಟಿ ನೀಡಿ 34 ಬೆಳೆಗಳಲ್ಲಿ 2109 ಕೀಟ/ರೋಗ ಬಾಧೆಗಳನ್ನು ಗುರುತಿಸಿ ರೈತರಿಗೆ ಕೈಗೊಳ್ಳಬೇಕಾದ ಅಗತ್ಯ ತಾಂತ್ರಿಕ ಮಾಹಿತಿಯನ್ನು ಒದಗಿಸಲಾಗಿರುತ್ತದೆ.<br>➢ ಕೀಟ/ರೋಗಗಳ ನಿರ್ವಹಣೆಗೆ ಕೈಗೊಳ್ಳಬೇಕಾದ ಕ್ರಮಗಳನ್ನು ರೈತ ಗುಂಪುಗಳ ಮೂಲಕ ಚರ್ಚಿಸಲಾಗುತ್ತಿದೆ ಹಾಗೂ ದಿನಪತ್ರಿಕೆ ಮತ್ತು ಸಮೂಹ ಮಾಧ್ಯಮಗಳ ಮೂಲಕ ಪ್ರಚಾರ ಕೈಗೊಳ್ಳಲಾಗುತ್ತಿದೆ.<br>➢ ಇಲಾಖೆಯ ವತಿಯಿಂದ ಆಯೋಜಿಸಲಾಗುವ ಸಭೆ ಮತ್ತು ತರಬೇತಿ ಕಾರ್ಯಕ್ರಮಗಳಲ್ಲಿ ಕೀಟ ರೋಗಗಳ ಬಗ್ಗೆ ರೈತರಿಗೆ ಅರಿವು ಮೂಡಿಸಲಾಗುತ್ತಿದೆ.<br>➢ ಬೆಳೆಗಳಿಗೆ ಬಾಧಿಸುವ ಕೀಟ/ರೋಗಗಳ ನಿರ್ವಹಣೆಗೆ ಅನುದಾನದ ಲಭ್ಯತೆಗೆ ಅನುಗುಣವಾಗಿ ಪೀಡೆನಾಶಕ ಮತ್ತು ಜೈವಿಕ ಪೀಡೆನಾಶಕಗಳನ್ನು ಶೇ.50ರ ಸಹಾಯಧನದಡಿ ಪ್ರತಿ |

| | | |
|---|---|---|
| | | ಹೆಕ್ಟೇರಿಗೆ ರೂ.500/-ಮೀರದಂತೆ ಪ್ರತಿ ರೈತರಿಗೆ ಪ್ರತಿ ಹಂಗಾಮಿಗೆ ಗರಿಷ್ಠ 2 ಹೆಕ್ಟೇರಿಗೆ ಸೀಮಿತಗೊಳಿಸಿ ರೈತ ಸಂಪರ್ಕ ಕೇಂದ್ರಗಳಲ್ಲಿ ದಾಸ್ತಾನೀಕರಿಸಿ ವಿತರಿಸಲಾಗುತ್ತಿದೆ.<br>➢ 2022-23ನೇ ಸಾಲಿನಲ್ಲಿ ಸಸ್ಯ ಸಂರಕ್ಷಣೆ ಯೋಜನೆಯಡಿ ಜೈವಿಕ ಪೀಡೆನಾಶಕ ಮತ್ತು ಜೈವಿಕ ನಿಯಂತ್ರಣಕಾರಕಗಳ ಘಟಕದಡಿ ರೂ.150.0 ಲಕ್ಷ ಮತ್ತು ಅವಶ್ಯಕತೆಗೆ ಅನುಗುಣವಾಗಿ ಕೀಟ/ರೋಗ ನಿರ್ವಹಣೆಗೆ ಸಹಾಯದನದಡಿ ಪೀಡೆನಾಶಕಗಳ ವಿತರಣೆ ಘಟಕದಡಿ ರೂ.200.00ಲಕ್ಷಗಳ ವಾರ್ಷಿಕ ಕಾರ್ಯಕ್ರಮವನ್ನು ಜಿಲ್ಲೆಗಳಿಗೆ ನೀಡಿ ಕಾರ್ಯಕ್ರಮದನ್ವಯ ಈಗಾಗಲೇ ಅನುದಾನವನ್ನು ಬಿಡುಗಡೆಗೊಳಿಸಲಾಗಿರುತ್ತದೆ.<br>➢ ಜಿಲ್ಲಾವಾರು ಅನುದಾನ ಬಿಡುಗಡೆ ವಿವರಗಳನ್ನು ಅನುಬಂಧ-2ರಲ್ಲಿ ಒದಗಿಸಲಾಗಿದೆ. |

**ಸಂಖ್ಯೆ:** AGRI-ASC/105/2022

(ಬಿ.ಸಿ. ಪಾಟೀಲ್)
ಕೃಷಿ ಸಚಿವರು